33 ಶ್ರೀ ಖಾದರ್ ಯು.ಟಿ (ಮಂಗಳೂರು)

ಬಿ.ಶ್ರೀರಾಮುಲು(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ ಮಂಗಳೂರು ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಬರುವ ಸರ್ಕಾರಿ ಪ್ರಾಥಮಿಕ ಘಟಕ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಆ ಹಾಗಿದ್ದಲ್ಲಿ, ಮೇಲ್ದರ್ಜೆಗೇರಿಸುವ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ, ಪ್ರಸಕ್ತ ಆರ್ಥಿಕ ವರ್ಷದಿಂದಲೇ ಜಾರಿಗೊಳಿಸಲಾಗುವುದೇ?

ರಾಜ್ಯದಲ್ಲಿರುವ 516 ಪ್ರಾಥಮಿಕ ಆರೋಗ್ಯ ಘಟಕಗಳನ್ನು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನಾಗಿ ಈಗಾಗಲೇ ಮೇಲ್ದರ್ಜೆಗೇರಿಸಲಾಗಿದೆ.

ಈಗಾಗಲೇ ರಾಜ್ಯದಲ್ಲಿನ ಅನೇಕ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದ್ದು, ಸದರಿ ಮೇಲ್ದರ್ಜೆಗೇರಿಸಲಾದ ಸಮುದಾಯ ಆರೋಗ್ಯ ಕೇಂದ್ರಗಳಿಗೆ ಒದಗಿಸಬೇಕಾಗಿರುವ ಮೂಲಭೂತ ಸೌಕರ್ಯ ಹಾಗೂ ಸಿಬ್ಬಂದಿಯನ್ನು ಪೂರ್ಣ ಪ್ರಮಾಣದಲ್ಲಿ ಒದಗಿಸಲು ಸಾಧ್ಯವಾಗಿರುವುದಿಲ್ಲ. ಈಗಾಗಲೇ ಮೇಲ್ದರ್ಜೆಗೇರಿಸಿರುವ ಅಂತಹ ಕೇಂದ್ರಗಳಿಗೆ ಸೌಲಭ್ಯ ಒದಗಿಸಿ ಬಲಪಡಿಸಬೇಕಾಗಿದೆ. ಆದುದರಿಂದ ಸದ್ಯದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಸಮುದಾಯ ಆರೋಗ್ಯ ಕೇಂದ್ರಗಳನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ.

36 ಶ್ರೀ ಗೋಪಾಲ ಭಂಡಾರಿ.ಹೆಚ್.

ಬಿ.ಎನ್. ಬಚ್ಚೇಗೌಡ(ಕಾರ್ಮಿಕ ಸಚಿವರು)

ಅ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಯಾವ ಯಾವ ತಾಲ್ಲೂಕಿ ನಿಂದ ಬೀಡಿ ಕಾರ್ಮಿಕರ ವಸತಿಗಾಗಿ ಆರ್ಥಿಕ ಸಹಾಯ ಕೋರಿ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; [ತಾಲ್ಲೂಕುವಾರು, ವರ್ಷವಾರು ವಿವರ ಒದಗಿಸುವುದು];

ಇಂಟಿಗ್ರೇಟೆಡ್ ಹೌಸಿಂಗ್ ಸ್ಕೀಂ ಎನ್ನುವ ಯೋಜನೆ ಅಡಿ ಕೇಂದ್ರ ಸರ್ಕಾರದ ಮಂಡಳಿಯಾದ ಬೀಡಿ ಕಲ್ಯಾಣ ಮಂಡಳಿಯು ಬೀಡಿ ಕಾರ್ಮಿಕರ ವಸತಿಗಾಗಿ ಆರ್ಥಿಕ ಸಹಾಯ ನೀಡುತ್ತಿದೆ. ಇದಕ್ಕೆ ಸಂಬಂಧಿಸಿದಂತೆ ಅರ್ಜಿಯನ್ನು ಫಲಾನುಭವಿಗಳು ಜಿಲ್ಲಾಧಿಕಾರಿಗಳ ಮುಖಾಂತರ ಕಲ್ಯಾಣ ಆಯುಕ್ತರು, ಬೀಡಿ ಕಲ್ಯಾಣ ಮಂಡಳಿ ಇವರಿಗೆ ಸಲ್ಲಿಸುತ್ತಾರೆ. ಈ ಯೋಜನೆಯು ಕೇಂದ್ರ ಸರ್ಕಾರದ ಯೋಜನೆಯಾಗಿರುವ ಕಾರಣ ಹಾಗೂ ಕಾರ್ಮಿಕ ಇಲಾಖೆಯ ಪಾತ್ರವು ಇಲ್ಲವಾದ ಕಾರಣ, ಈ ಮಾಹಿತಿಯು ಕಾರ್ಮಿಕ ಇಲಾಖೆಯಲ್ಲಿ ಲಭ್ಯವಿರುವುದಿಲ್ಲ.